<u>ಅಸಲು ದಾವಾ ಸಂಖ್ಯೆ: **- 05/2015**</u>                    ಪಿ.ಡಬ್ಲ್ಯೂ.:**-2**

ದಿನಾಂಕಃ **05-04-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- 5 ನೇ ಪ್ರತಿವಾದಿ ಪರ ವಕೀಲರಿಂದ :-</u>

ಈ ದಾವೆಯನ್ನು ಸಲ್ಲಿಸಲು ನಾನು ಮತ್ತು ನನ್ನ ಅಣ್ಣ ಮಾಹಿತಿಯನ್ನು ಕೊಟ್ಟಿರುತ್ತೇವೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳನ್ನು ನಾನು ಮತ್ತು ನನ್ನ ಅಣ್ಣ ಹೇಳಿ ನಮೂದು ಮಾಡಿಸಿರುತ್ತೇವೆ. ಪ್ರತಿವಾದಿಗಳು ನಮ್ಮ ಆಸ್ತಿಯ ಸ್ವಾಧೀನಕ್ಕೆ ತೊಂದರೆಯನ್ನು ಉಂಟು ಮಾಡಿದ್ದರಿಂದ ದಾವೆಯನ್ನು ಸಲ್ಲಿಸಿದ್ದೇವು. ದಾವಾ ಆಸ್ತಿಗೆ ಸಂಬಂಧಿಸಿದಂತೆ ಪಹಣಿ ಮತ್ತು ಮ್ಯುಟೇಷನ್ ರಿಜಿಸ್ಟರ್ ನ್ನು ಹಾಜರುಪಡಿಸಿರುತ್ತೇನೆ. 2014 ನೇ ಸಾಲಿನಲ್ಲಿ ಈ ದಾವೆಯನ್ನು ಸಲ್ಲಿಸುವ ಸಮಯದಲ್ಲಿ ದಾವಾ ಆಸ್ತಿಯಲ್ಲಿ ಮೆಕ್ಕೆ ಜೋಳವನ್ನು ಬೆಳೆಯುತ್ತಿದ್ದೇವು.

ನಿಪಿ-1 ರಲ್ಲಿ ಯಾವ ಬೆಳೆಯನ್ನು ಬೆಳೆಯುತ್ತಿದ್ದೇವೆ ಎಂದು ನಮೂದು ಮಾಡಿಲ್ಲ ಎಂದರೆ ಸರಿ. ದಾವಾ ಆಸ್ತಿಯಲ್ಲಿ ನಾವು ಮೆಕ್ಕೆಜೋಳ, ಜೋಳ ಮತ್ತು ರಾಗಿಯನ್ನು ಬೆಳೆಯುತ್ತೇವೆ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಬೆಳೆ ದೃಢೀಕರಣ ಪತ್ರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವ ಬಗ್ಗೆ ನನ್ನ ಅಣ್ಣ 1 ನೇ ವಾದಿಗೆ ಗೊತ್ತು. 1990 ನೇ ಸಾಲಿಗಿಂತ ಪೂರ್ವದಲ್ಲಿ ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದರು ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನಾವು ಯಾವುದೇ ಬೆಳೆಯನ್ನು ಬೆಳೆಯಾದ ಕಾರಣ ಮತ್ತು ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಸ್ವಾಧೀನಾನುಭವದಲ್ಲಿ ಇದ್ದ ಕಾರಣ ಪಹಣಿಯಲ್ಲಿ ಯಾವ ಬೆಳೆಯನ್ನು ನಮೂದು ಮಾಡಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಯಾವುದೇ ವ್ಯವಸಾಯದ ಚಟುವಟಿಕೆಗಳನ್ನು ಮಾಡುತ್ತಿಲ್ಲ ಎಂದರೆ ಸರಿಯಲ್ಲ. ನನ್ನ ದಾವಾ ಪತ್ರದಲ್ಲಿ ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಯಾವುದೇ ಮನೆಯನ್ನು ಕಟ್ಟಿಕೊಂಡು ವಾಸ ಮಾಡುತ್ತಿಲ್ಲ ಮತ್ತು ಆದರೆ ನಾವು ಫಾರಂ ಮನೆಯನ್ನು ಕಟ್ಟಿದ್ದೇವೆ ಎಂದು ನಮೂದು

ಮಾಡಿರುತ್ತೇವೆ ಎಂದರೆ ಸರಿ. ದಾವಾ ಆಸ್ತಿಯಲ್ಲಿ ನಾವು ಯಾವುದೇ ಫಾರಂ ಮನೆಯನ್ನು ಕಟ್ಟಿಲ್ಲ ಆದರೆ ಪ್ರತಿವಾದಿಗಳು ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನಾವು ಸ್ವಾಧೀನಾನುಭವದಲ್ಲಿ ಇಲ್ಲ ಎಂದರೆ ಸರಿಯಲ್ಲ. ಆಸ್ತಿ ನಂ.91 ರಲ್ಲಿ ಒಟ್ಟು ವಿಸ್ತೀರ್ಣ 66 X110 ಅಡಿರಲ್ಲಿ ಪ್ರತಿವಾದಿಗಳು ವಾಸವಾಗಿದ್ದರೆ ಎಂದರೆ ಸರಿ. 1 ಮತ್ತು 2 ನೇ ಪ್ರತಿವಾದಿಯ ತಾಯಿ ರತ್ನಮ್ಮ ಆಸ್ತಿ ನಂ.91 ರಲ್ಲಿ 22 X 110 ರಲ್ಲಿ ಮನೆಯನ್ನು ಕಟ್ಟಿಕೊಂಡು ಸುಮಾರು 35-40 ವರ್ಷಗಳಿಂದ ವಾಸವಾಗಿದ್ದರೆ ಎಂದರೆ ಸರಿಯಲ್ಲ.

1 ಮತ್ತು 2 ನೇ ಪ್ರತಿವಾದಿಯ ತಾಯಿ ರತ್ನಮ್ಮ ನರಸಿಂಹಪ್ಪರವರಿಂದ ದಿಃ 02-08-2000 ರಂದು ನೋಂದಾಯಿತ ಕ್ರಯ ಪತ್ರವನ್ನು ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. 1 ಮತ್ತು 2 ನೇ ಪ್ರತಿವಾದಿಯ ತಾಯಿ ರತ್ನಮ್ಮ ತಾನು ಖರೀದಿ ಮಾಡಿದ ಆಸ್ತಿಯಲ್ಲಿ ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದರೂ ಸಹ ನಾವು ಅವರಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆ ಮತ್ತು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಆಸ್ತಿ ನಂ.92 ರಲ್ಲಿ 22 X 110 ರಲ್ಲಿ 5 ನೇ ಪ್ರತಿವಾದಿ ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದಾರೆ ಎಂದರೆ ಸರಿಯಲ್ಲ. ಆಸ್ತಿ ನಂ.92 ರ ಪೂರ್ವಕ್ಕೆ ಖಾಸಿಂ ಸಾಬ್ ರವರ ಸ್ವತ್ತು ಎಂದರೆ ಸರಿಯಲ್ಲ. ಪಶ್ಚಿಮಕ್ಕೆ ಭರ್ಮಪ್ಪರವರಿಗೆ ಸೇರಿದ ಜಾಗ ಎಂದರೆ ಸರಿಯಲ್ಲ. ಉತ್ತರಕ್ಕೆ ರಸ್ತೆ ಎಂದರೆ ಸರಿಯಲ್ಲ. ದಕ್ಷಿಣಕ್ಕೆ ಕೃಷ್ಣಪ್ಪರವರ ಮನೆ ಎಂದರೆ ಸರಿಯಲ್ಲ. ಆಸ್ತಿ ನಂ.92 ರಲ್ಲಿ ಈಗ 5 ನೇ ಪ್ರತಿವಾದಿ ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದರೆ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿ ಸದರಿ ಆಸ್ತಿಯಲ್ಲಿ ಮನೆಯನ್ನು ಕಟ್ಟಿಕೊಂಡು ವಾಸವಾಗಿರುವ ಬಗ್ಗೆ ವಿದ್ಯುತ್ ಬಿಲ್ ನ್ನು ಹಾಜರುಪಡಿಸಿರುತ್ತಾರೆ ಎಂದರೆ ಸರಿಯಲ್ಲ. 1992 ನೇ ಸಾಲಿನಿಂದಲೂ 5 ನೇ ಪ್ರತಿವಾದಿ ಆಸ್ತಿ ನಂ.92 ರಲ್ಲಿ ಮನೆಯನ್ನು ಕಟ್ಟಿಕೊಂಡು ಯಾವುದೇ ಅಡೆತಡೆ ಇಲ್ಲದೇ ಶಾಂತಿಯುತ್ತವಾಗಿ ಸ್ವಾಧೀನಾನುಭವದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ಆಸ್ತಿ ನಂ.92 ರಲ್ಲಿ 1 ರಿಂದ 4 ನೇ ಪ್ರತಿವಾದಿಗಳು ಮನೆಯನು ಕಟ್ಟಿಕೊಂಡು ವಾಸವಾಗಿದ್ದರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಕೃಷ್ಟಿ ಚಟುವಟಿಕೆಗಳನ್ನು ಮಾಡುತ್ತಿರುವ ಬಗ್ಗೆ

ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಸ್ವಾಧೀನದಲ್ಲಿ ಇದ್ದರೂ ಸಹ ನಾವು ಸ್ವಾಧೀನದಲ್ಲಿ ಇದ್ದೇವೆ ಎಂದು ಸುಳ್ಳು ದಾವೆಯನ್ನು ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ಸೇರಿದ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿದ್ದೇವೆ ಎಂದರೆ ಸರಿಯಲ್ಲ. ಆಸ್ತಿ ನಂ.92 ರಲ್ಲಿ 1 ಮತ್ತು 2 ನೇ ಪ್ರತಿವಾದಿಯ ತಂದೆ ಮರುಳಪ್ಪರವರ ಸಮಾಧಿ ಇದೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಮನೆಯನ್ನು ಕಟ್ಟಿಕೊಂಡು ಮತ್ತು ದನದ ಕೊಟ್ಟಿಗೆಗಳನ್ನು ನಿರ್ಮಿಸಿಕೊಂಡು ವಾಸವಾಗಿದ್ದರೆ ಎಂದರೆ ಸರಿಯಲ್ಲ. ಆಸ್ತಿ ನಂ.92 ರಲ್ಲಿ ಪ್ರತಿವಾದಿಗಳು ಸುಮಾರು 40-45 ವರ್ಷಗಳಿಂದ ತೆಂಗಿನ ಮರಗಳನ್ನು ಬೆಳೆಸಿದರೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ತಾವು ವಾಸಿಸುತ್ತಿರುವ ಮನೆಗೆ ವಿದ್ಯುತ್ ಸಂಪರ್ಕವನ್ನು ಪಡೆದುಕೊಂಡು ಸ್ವಾಧೀನಾನುಭವದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ಸುಳ್ಳು ದಾವೆಯನ್ನು ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ದಾವಾ ಆಸ್ತಿಯ ಪೂರ್ವಕ್ಕೆ ಖಾಸಿಂ ಸಾಬ್ ರವರಿಗೆ ಸೇರಿದ ಸ್ವತ್ತು, ಪಶ್ಚಿಮಕ್ಕೆ ನರಸಿಂಹಸ್ವಾಮಿ ದೇವಸ್ಥಾನ, ಉತ್ತರಕ್ಕೆ ರಾಂಪುರ ರಸ್ತೆ, ದಕ್ಷಿಣಕ್ಕೆ ಉಂಬಳಿ ಜಮೀನು ಇದೆ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಮನೆಯನ್ನು ಕಟ್ಟಿಕೊಂಡಿದರೆ ಎಂದು ನಮ್ಮ ವಾದ ಪತ್ರದಲ್ಲಿ ತಿಳಿಸಿರುತ್ತೇವೆ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.